# ಕನ್ನಡ ಪೋಸ್ಟ್

KANNADA POST | ಇದು ಸುದ್ದಿ ವಿಲಾಸ | ಕನ್ನಡ ದಿನಪತ್ರಿಕೆ

ಸಂಪಾದಕ : ಮಂಜು ಬನವಾಸೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 110 | Pages. 2 | Date: 02-04-2026, THURSDAY | RNI NO: KARKAN/2024/89601 | Kannada Daily

ಸಂಪುಟ : 02 – ಸಂಚಿಕೆ : 110 – ಪುಟಗಳು : 2 | 02-04-2026 | ಗುರುವಾರ | Ph: 8762954248 | ದರ : ₹1


## ಬೇಲೂರು ಚನ್ನಕೇಶವ ಸ್ವಾಮಿ ಜಾತ್ರೋತ್ಸವ ಸಂಪನ್ನ

### ರಥೋತ್ಸವಕ್ಕೆ ಸಾಕ್ಷಿಯಾದ ಸಹಸ್ರಾರು ಭಕ್ತರು | ಇಂದು ಸಂಜೆ 7 ಗಂಟೆಗೆ ತೆಪ್ಪೋತ್ಸವ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ಇತಿಹಾಸ ಪ್ರಸಿದ್ಧ ಶ್ರೀ ಚನ್ನಕೇಶವ ಸ್ವಾಮಿ ನಾಡ ರಥೋತ್ಸವ ಬುಧವಾರ ಸಹಸ್ರಾರು ಭಕ್ತರ ಜಯಘೋಷ, ಹರ್ಷೋದ್ಘಾರ ಹಾಗೂ ದೇವರ ನಾಮ ಸ್ಮರಣೆಯೊಂದಿಗೆ ನಡೆಯಿತು.

ಮಂಗಳವಾರ ನಡೆದ ಬ್ರಹ್ಮ ರಥೋತ್ಸವದಂದು ರಥವನ್ನು ರಂಗ ಮಂದಿರ ಮುಂಭಾಗ ನಿಲ್ಲಿಸಲಾಗಿತ್ತು. ರಥ ನಿಲ್ಲುವ ಜಾಗವು ಶ್ರೀ ವಿಷ್ಣು ಭಗವಾನ್ ಮೋಹಿನಿ ಅವತಾರವನ್ನು ತಾಳಿ ಭಸ್ಮಾಸುರನ್ನು ಸಂಹರಿಸಿದ ಸ್ಥಳ ಎಂಬ ನಂಬಿಕೆಯಿದೆ. ಅಲ್ಲದೆ ವಾರ ತಿಥಿ, ನಕ್ಷತ್ರದ ಶುಭಗಳಿಗೆ ನೋಡಿ ರಥ ಎಳೆಯುವುದರಿಂದ ಗಳಿಗೆ ತೇರು ಎಂದು ಕರೆಯಲಾಗುತ್ತದೆ.

ಶಾಸಕ ಹೆಚ್.ಕೆ.ಸುರೇಶ್ ಹಾಗೂ ಸ್ಥಳೀಯ ಅಧಿಕಾರಿಗಳು ಭಾಗವಹಿಸಿದ್ದರು.

ಮಧ್ಯಾಹ್ನ 2 ಗಂಟೆಗೆ ಆರಂಭವಾದ ಉತ್ಸವ ದೇಗುಲದ ಮೂರು ಮೂಲೆ ಸುತ್ತಿ ನಂತರ ಸ್ವಸ್ಥಾನ ತಲುಪಿತು. ಸುತ್ತಲಿನ ಗ್ರಾಮದಿಂದ ಬಂದಿದ್ದ ನಾಡ ಪಟೇಲರು ಹಾಗೂ ಭಕ್ತರು ಬೆಳಿಗ್ಗೆಯಿಂದಲೇ ಚನ್ನಕೇಶವಸ್ವಾಮಿ ದೇಗುಲದ ಬಳಿ ಜಮಾಯಿಸಿದ್ದರು. ರಥ ಎಳೆಯುವ ಸಂದರ್ಭದಲ್ಲಿ ಭಕ್ತರು ಗೋವಿಂದ ನಾಮ ಸ್ಮರಣೆ ಮಾಡಿದರು. ದೇವರಿಗೆ ಬಾಳೆ ಹಣ್ಣು, ಧವನ ಎಸೆದು ಭಕ್ತಿ ಸಮರ್ಪಿಸಿದರು. ಬಯಲು ರಂಗಮಂದಿರದ ಮೂಲೆಯಿಂದ ಹೊರಟ ರಥವು ನಂತರ ದೇವಸ್ಥಾನದ ಹಿಂಭಾಗ ಸುತ್ತಿ ಕಾಮನ ಮೂಲೆ ಬಳಸಿ ರಥದ ಮನೆ ಮುಂಭಾಗ ತಂದು ನಿಲ್ಲಿಸಲಾಯಿತು.

ನಾಡ ಪಟೇಲರು ಪ್ರಾರ್ಥನೆ ಸಲ್ಲಿಸಿ ಗೌರವ ಪಡೆದ ನಂತರ ರಥ ಎಳೆಯುವುದು ವಾಡಿಕೆ.

ನಾಡ ತೇರಿಗೆ ತಾಲೂಕಿನ ಸುತ್ತಮುತ್ತಲಿನ ಗ್ರಾಮದ ನಾಡಗೌಡರನ್ನು ಪ್ರಮುಖ ದಿಕ್ಕುಗಳ ಪುರ ಪ್ರವೇಶದಲ್ಲಿ ಗೌರವದೊಂದಿಗೆ ಬರಮಾಡಿಕೊಳ್ಳಲಾಯಿತು. ಜಾತ್ರಾ ಮಹೋತ್ಸವ ಅಂಗವಾಗಿ ದೇವಾಲಯ ಹಾಗೂ ಪಟ್ಟಣದ ಪ್ರಮುಖ ರಸ್ತೆಗಳನ್ನು ವಿದ್ಯುತ್ ದೀಪಗಳಿಂದ ಅಲಂಕರಿಸಲಾಗಿತ್ತು.

### ಅಚ್ಚುಕಟ್ಟು ವ್ಯವಸ್ಥೆಗೆ ಮೆಚ್ಚುಗೆ

ಮಾ. 23 ರಿಂದ ಆರಂಭವಾಗಿದ್ದ ಜಾತ್ರೆ ಸಂಪನ್ನಗೊಂಡಿತು. ಕಳೆದ ಒಂದು ವಾರದಿಂದ ಸಹಸ್ರಾರು ಭಕ್ತರು ಹಾಗು ಪ್ರವಾಸಿಗರು ಭೇಟಿ ನೀಡಿರುವುದರಿಂದ ಪಟ್ಟಣದಲ್ಲಿ ಅಸ್ವಚ್ಛತೆ ಮಿತಿ ಮೀರಿತ್ತು. ಜಾತ್ರೋತ್ಸವ ಮುಗಿಯುತ್ತಿದ್ದಂತೆ ಕಾರ್ಯ ಪ್ರವೃತ್ತರಾದ ಪುರಸಭೆ ಪೌರ ಕಾರ್ಮಿಕರು ಸ್ವಚ್ಛತಾ ಕಾರ್ಯದಲ್ಲಿ ನಿರತರಾದರು. ಪುರಸಭೆ ಅಧ್ಯಕ್ಷೆ ಉಷಾ ಸತೀಶ್, ಮುಖ್ಯಾಧಿಕಾರಿ ಬಸವರಾಜ ಟಾಕಪ್ಪ ಶಿಗ್ಗಾವಿ ಮೇಲ್ವಿಚಾರಣೆ ವಹಿಸಿದ್ದರು. ಜಾತ್ರಾ ಮಹೋತ್ಸವ ಅಂಗವಾಗಿ ಈ ಬಾರಿ ಅಧಿಕಾರಿಗಳು ಕೈಗೊಂಡಿದ್ದ ವ್ಯವಸ್ಥೆಗೆ ಮೆಚ್ಚುಗೆ ವ್ಯಕ್ತವಾಯಿತು. ಪಾರ್ಕಿಂಗ್, ವಿದ್ಯುತ್ ದೀಪಾಲಂಕಾರ, ನೆರಳಿನ ವ್ಯವಸ್ಥೆಗೆ ಜನರು ಮನಸೋತರು.

ಬಿಸಿಲಿನ ಝಳಕ್ಕೆ ಬಸವಳಿಸಿದ್ದ ಭಕ್ತರಿಗೆ ವಿವಿಧ ಸಂಘಟನೆ, ಸಂಘ ಸಂಸ್ಥೆ, ಎಸ್‌ಬಿಐ ಬ್ಯಾಂಕ್, ವರ್ತಕರ ಸಂಘ, ಲಕ್ಷ್ಮೀ ಮೆಡಿಕಲ್, ವಿಶ್ವಕರ್ಮ ಸಮಾಜ ಸೇರಿ ಪ್ರಮುಖರು ಬಿಸಿಲಲ್ಲಿ ಮಜ್ಜಿಗೆ, ಪಾನಕ ಹಾಗೂ ಉಪಾಹಾರ, ಮಧ್ಯಾಹ್ನ ಪ್ರಸಾದ ವಿತರಿಸಿ ಸಹಕರಿಸಿದರು. ಗುರುವಾರ ಸಂಜೆ 7 ಗಂಟೆಗೆ ವಿಷ್ಣುಸಮುದ್ರ ಕೆರೆ ಪಕ್ಕದ ಕಲ್ಯಾಣಿಯಲ್ಲಿ ತೆಪ್ಪೋತ್ಸವ ನಡೆಯಲಿದೆ.

## ಅಕ್ರಮ ಬಂಧನ: 12 ಕಾರ್ಮಿಕರ ರಕ್ಷಣೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಸೀಕೆರೆ: ಶುಂಠಿ ಕೆಲಸಕ್ಕೆಂದು ಹೊರ ಜಿಲ್ಲೆಗಳಿಂದ ಕಾರ್ಮಿಕರನ್ನು ಕರೆತಂದು ಅಕ್ರಮ ಬಂಧನದಲ್ಲಿರಿಸಿದ್ದ ಪ್ರಕರಣ ತಡವಾಗಿ ಬೆಳಕಿಗೆ ಬಂದಿದ್ದು, ಜಾವಗಲ್ ಠಾಣೆ ಪೊಲೀಸರು ಕಾರ್ಮಿಕರನ್ನು ಸುರಕ್ಷಿತವಾಗಿ ಅವರವರ ಊರಿಗೆ ಕಳುಹಿಸಿಕೊಟ್ಟಿದ್ದಾರೆ.

ಜಾವಗಲ್ ಹೋಬಳಿ ಚಿಕ್ಕಜ್ಜಿಕಟ್ಟೆಹಳ್ಳಿಯಲ್ಲಿ ಅಂಗವಿಕಲ, ಬಾಲ ಕಾರ್ಮಿಕ ಸೇರಿ 12 ಕಾರ್ಮಿಕರು ಕಳೆದ 1 ವರ್ಷದಿಂದ ಕೆಲಸ ಮಾಡುತ್ತಿದ್ದರು ಎನ್ನಲಾಗಿದೆ.

#### ಎಫ್‌ಐಆರ್‌ಗೆ ಕಾರಣವಾದ ಘಟನೆ

ಆದರೆ ಈ ಪ್ರಕರಣ ಮತ್ತೊಂದು ತಿರುವು ಪಡೆದಿದ್ದು ಗ್ರಾಮಸ್ಥರ ನಡುವೆ ವೈಮನಸ್ಸಿಗೆ ಕಾರಣವಾಗಿದೆ. ನಾಲ್ವರ ವಿರುದ್ಧ ಜಾತಿ ನಿಂದನೆ ಹಾಗೂ ಹಲ್ಲೆ ಪ್ರಕರಣ ದಾಖಲಾಗಿದೆ.

ಚಿಕ್ಕಜ್ಜಿಕಟ್ಟೆಹಳ್ಳಿಯ ಹರೀಶ್, ತೇಜ, ಅಶೋಕ್ ಹಾಗೂ ದಯಾನಂದ ವಿರುದ್ಧ ದೂರು ದಾಖಲಾಗಿದೆ. ಅದೇ ಗ್ರಾಮದ ಆನಂದ್, ಯೋಗೀಶ್, ಶಶಿಕುಮಾರ್ ಪ್ರಕರಣ ದಾಖಲಿಸಿದ್ದಾರೆ.

ಮಾ. 30ರಂದು ಹರೀಶ್ ಎಂಬಾತ ಪಿಕ್‌ಅಪ್ ವಾಹನ ತಡೆದು ಹಿಂದಿನ ರಾತ್ರಿ ಜಾವಗಲ್ ಠಾಣೆ ಎದುರು ಮಾತನಾಡಿದ್ದು ನೀವೇ ಅಲ್ಲವೇ ಎಂದು ಅವಾಚ್ಯ ಶಬ್ದಗಳಿಂದ ನಿಂದಿಸಿದ. ನಂತರ ಅಶೋಕ್, ದಯಾನಂದ ಹಾಗೂ ತೇಜ ಅವರನ್ನು ಕರೆ ಮಾಡಿ ಕರೆಸಿ ಎಲ್ಲರೂ ಮನಬಂದಂತೆ ಹಲ್ಲೆ ನಡೆಸಿದರು. ಜಗಳ ಬಿಡಿಸಲು ಬಂದ ನಂದ, ಯುವರಾಜ ಹಾಗೂ ವೃದ್ಧೆ ಲಕ್ಷ್ಮಮ್ಮ ಎಂಬುವವರ ಮೇಲೆ ದಾಳಿ ಮಾಡಿದರು. ಅಷ್ಟರಲ್ಲಿ ಊರಿನ ನಾಲ್ಕಾರು ಜನರು ಬಂದು ಜಗಳ ಬಿಡಿಸಿದರು. ಯಾವುದೇ ತಪ್ಪು ಮಾಡದ ನಮ್ಮ ವಿರುದ್ಧ ನಾಲ್ವರು ಹಗೆತನ ಸಾಧಿಸಿ ಜಾತಿ ನಿಂದನೆ ಮಾಡಿದ್ದಾರೆ. ಎಲ್ಲರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕೆಂದು ದೂರಿನಲ್ಲಿ ಉಲ್ಲೇಖಿಸಿದ್ದಾರೆ.

ತಮ್ಮ ವಿರುದ್ಧ ಎಫ್‌ಐಆರ್ ದಾಖಲಿಸಿರುವುದನ್ನು ಖಂಡಿಸಿದ ದಯಾನಂದ, ಹರೀಶ್ ಹಾಗೂ ಅಶೋಕ್, ತೇಜ ಅವರು ವಿಶೇಷ ಚೇತನ, ಬಾಲ ಕಾರ್ಮಿಕ ಸೇರಿ 12 ಕೂಲಿ ಕಾರ್ಮಿಕರನ್ನು ಅಕ್ರಮ ಬಂಧನದಿಂದ ಬಿಡುಗಡೆ ಮಾಡಿಸಿದ್ದೇ ಇಷ್ಟಕ್ಕೆಲ್ಲ ಕಾರಣವೆಂದು ಹೇಳಿದ್ದಾರೆ.

## ಸಿಲಿಂಡರ್ ದಾಸ್ತಾನು: ಆತುರಪಡದಂತೆ ಗ್ರಾಹಕರಲ್ಲಿ ತಹಶೀಲ್ದಾರ್ ಮನವಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಆಲೂರು: ಗ್ಯಾಸ್ ಸಿಲಿಂಡರ್ ಅಭಾವದಿಂದ ಪೂರೈಕೆಯಲ್ಲಿ ವ್ಯತ್ಯಯವಾಗುತ್ತಿದ್ದು ಗ್ರಾಹಕರು ಆತಂಕಕ್ಕೆ ಒಳಗಾಗದೆ ಸಹಕರಿಸಬೇಕೆಂದು ತಹಶೀಲ್ದಾರ್ ಮಲ್ಲಿಕಾರ್ಜುನ ಮನವಿ ಮಾಡಿದ್ದಾರೆ.

ಸಿಲಿಂಡರ್ ಪಡೆಯಲು ಅನಗತ್ಯ ಗ್ಯಾಸ್ ಏಜೆನ್ಸಿ ಮುಂದೆ ಸರತಿ ಸಾಲಿನಲ್ಲಿ ನಿಲ್ಲುವುದು ಬೇಡ. ಇ-ಕೆವೈಸಿ ಮಾಡಿರುವ ಗ್ರಾಹಕರು ತಮ್ಮ ಮೊಬೈಲ್ ನಂಬರ್ ಮೂಲಕ ಬುಕ್ಕಿಂಗ್ ಮಾಡಬಹುದು. ಮೊ.ನಂ. 7588888824, 8454955555ಗೆ ಕರೆ ಮಾಡಿ ಬುಕ್ಕಿಂಗ್ ಮಾಡಿಕೊಳ್ಳಬಹುದು.

ಒಮ್ಮೆ ಬುಕಿಂಗ್ ಮಾಡಿದ ನಂತರ ನಗರ ಪ್ರದೇಶಕ್ಕೆ 25 ದಿನಗಳ ನಂತರ ಮತ್ತು ಗ್ರಾಮೀಣ ಪ್ರದೇಶಕ್ಕೆ 45 ದಿನಗಳ ನಂತರ ಮತ್ತೆ ಬುಕ್ಕಿಂಗ್ ಮಾಡಲು ಅವಕಾಶವಿದೆ. ಅನಗತ್ಯವಾಗಿ ಕಚೇರಿಗೆ ಅಲೆಯುವುದರಿಂದ ಪ್ರಯೋಜನವಿಲ್ಲವೆಂದು ಅವರು ತಿಳಿಸಿದ್ದಾರೆ.



#### ಏಜೆನ್ಸಿ ಎದುರು ಜನರ ದಂಡು

ಮಧ್ಯಪ್ರಾಚ್ಯ ರಾಷ್ಟ್ರಗಳಲ್ಲಿ ನಡೆಯುತ್ತಿರುವ ಯುದ್ಧದಿಂದ ಗ್ಯಾಸ್ ಸಿಲಿಂಡರ್ ಪೂರೈಕೆಯಲ್ಲಿ ವ್ಯತ್ಯವಾಗಿದ್ದು ಪಟ್ಟಣದ ಭಾರತ್ ಗ್ಯಾಸ್ ಏಜೆನ್ಸಿ ಎದುರು ಬುಧವಾರ ಬುಕ್ಕಿಂಗ್ ಮಾಡಲು ಗ್ರಾಹಕರು ಮುಗಿಬಿದ್ದರು.

ಗ್ಯಾಸ್ ಸಿಲಿಂಡರ್ ಬುಕ್ಕಿಂಗ್‌ಗೆ ನೀಡಿರುವ ದೂರವಾಣಿ ಸಂಖ್ಯೆ ನಿಷ್ಕ್ರಿಯವಾಗಿರುವುದರಿಂದ ನೂರಾರು ಜನರು ಕಚೇರಿಗೆ ಆಗಮಿಸಿದ್ದರು. ಅದರಿಂದ ಗಲಿಬಿಲಿಗೊಂಡ ಸಿಬ್ಬಂದಿ ತಕ್ಷಣ ಪೊಲೀಸರಿಗೆ ಕರೆ ಮಾಡಿ ವಿಷಯ ತಿಳಿಸಿದರು. ಸ್ಥಳಕ್ಕೆ ತಹಶೀಲ್ದಾರ್ ಮಲ್ಲಿಕಾರ್ಜುನ ಅವರೊಂದಿಗೆ ಬಂದ ಪೊಲೀಸರು ಜನರನ್ನು ನಿಯಂತ್ರಿಸಲು ಹರಸಾಹಸಪಡಬೇಕಾಯಿತು.

ಮಹಿಳೆ, ವೃದ್ಧರು ಹಾಗು ವಯಸ್ಕರು ಹೆಚ್ಚಿನ ಸಂಖ್ಯೆಯಲ್ಲಿ ಜಮಾಯಿಸಿದ್ದರಿಂದ ಕಚೇರಿ ಬಾಗಿಲು ಹಾಕಲಾಯಿತು. ತಹಶೀಲ್ದಾರ್ ಮಲ್ಲಿಕಾರ್ಜುನ ಮಾತನಾಡಿ, ಗ್ಯಾಸ್ ಸಿಲಿಂಡರ್ ಬುಕ್ ಮಾಡಿದವರಿಗಷ್ಟೇ ವಿತರಿಸಲಾಗುವುದು. ಈಗ ಬುಕ್ ಮಾಡಿದರೆ ನೀಡುವುದು ಕಷ್ಟ. ಮಂಗಳವಾರ ಸಿಲಿಂಡರ್ ತಲುಪಿಲ್ಲ. ಈಗ 200 ಸಿಲಿಂಡರ್‌ಗಳಷ್ಟೇ ಇದ್ದು ಮೊದಲು ಬುಕ್ ಮಾಡಿದವರಿಗೆ ಕೊಡಲಾಗುತ್ತದೆ. ಕಚೇರಿಗೆ ಬಂದವರಿಗೆ ಸಿಲಿಂಡರ್ ನೀಡಬೇಕೆಂಬ ನಿಯಮವಿಲ್ಲ. ಸಮಾಧಾನದಿಂದ ವರ್ತಿಸಿದರೆ ಬುಕ್ಕಿಂಗ್ ಹಿರಿತನದ ಆಧಾರದಡಿ ಒಬ್ಬೊಬ್ಬರಿಗೆ ನೀಡಲಾಗುತ್ತದೆ. ಇಲ್ಲವಾದರೆ ಮನೆ ಮನೆಗೆ ತಲುಪಿಸಲಾಗುತ್ತದೆಂದು ಸ್ಪಷ್ಟಪಡಿಸಿದರು. ತಹಶೀಲ್ದಾರ್ ಹೇಳಿಕೆ ಬಳಿಕ ಆಗ ತಾನೆ ಬುಕ್ಕಿಂಗ್ ಮಾಡಲು ಬಂದವರು ವಾಪಸ್ಸಾದರು.

## ಪುತ್ರನ ಸಂಶಯಾಸ್ಪದ ಸಾವು: ಪೊಲೀಸರ ತನಿಖೆಗೆ ಕುಟುಂಬಸ್ತರ ಆಕ್ಷೇಪ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಸ್ನೇಹಿತರೊಂದಿಗೆ ಜಾತ್ರೆಗೆ ತೆರಳಿದ್ದ ಪುತ್ರ ಸಂಶಯಾಸ್ಪದವಾಗಿ ಸಾವನ್ನಪ್ಪಿ ಎರಡು ತಿಂಗಳು ಕಳೆದರೂ ಪೊಲೀಸರು ಸಮರ್ಪಕ ತನಿಖೆ ನಡೆಸಿ ನ್ಯಾಯ ಒದಗಿಸಲು ವಿಫಲರಾಗಿದ್ದಾರೆ ಎಂದು ಮೃತನ ಕುಟುಂಬಸ್ಥರು ಆರೋಪಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಸಹೋದರಿ ಪ್ರಿಯ ಹಾಗೂ ತಂದೆ ಶಿವಪ್ಪ ಮಾತನಾಡಿ, ತಾಲೂಕಿನ ಮಠಸಾಗರ ಗ್ರಾಮದ ನಿವಾಸಿ ಜೀವನ್ ಕುಮಾರ್ (32) ಮೃತಪಟ್ಟ ಯುವಕ. ಅವಿವಾಹಿತನಾಗಿದ್ದ ಅವರು ಟಿಂಬರ್ ಲೇಬರ್ ಕೆಲಸ ಮಾಡಿಕೊಂಡು ಕುಟುಂಬದೊಂದಿಗೆ ವಾಸವಾಗಿದ್ದರು ಎಂದು ತಿಳಿಸಿದರು.

2026ರ ಫೆ. 2 ರ ಬೆಳಿಗ್ಗೆ ಸಕಲೇಶಪುರದಲ್ಲಿ ನಡೆಯುತ್ತಿದ್ದ ರಥೋತ್ಸವ ಹೊರಟಿದ್ದಾಗ ಬಿ.ಎಂ. ರಸ್ತೆಯ ಕೊಲ್ಲಹಳ್ಳಿ ಗ್ರಾಮದ ಸಮೀಪ ತುರ್ತು ಕೆಲಸವಿದೆ ಎಂದು ಹೇಳಿ ತಂದೆಯನ್ನು ಇಳಿಸಿ, ನಂತರ ಬರುತ್ತೇನೆಂದು ತಿಳಿಸಿದ್ದಾನೆ ಎಂದರು.



ಸಂಜೆ 4 ಗಂಟೆಗೆ ತಾಯಿ ಕುಸುಮ ಅವರು ಮಗನಿಗೆ ಕರೆ ಮಾಡಿದಾಗ, ಬಾಳೆಗದ್ದೆ ಪ್ರದೇಶದಲ್ಲಿ ಸ್ನೇಹಿತ ಮೋಹನ್ ಹಾಗೂ ಇತರರೊಂದಿಗೆ ಇರುವುದಾಗಿ ತಿಳಿಸಿದ್ದ.

ಸಂಜೆ 5 ಗಂಟೆಗೆ ಮತ್ತೆ ಕರೆ ಮಾಡಿದಾಗ ಕರೆ ಸ್ವೀಕರಿಸಿದ ಮೋಹನ್ ಆನಾವು ಗಾಂಜಾ ಸೇವನೆ ಹಾಗೂ ಮದ್ಯಪಾನ ಮಾಡುತ್ತಿದ್ದೇವೆ. ನಿನ್ನ ಮಗನನ್ನು ಮಣ್ಣಿಗೆ ಕಳುಹಿಸುತ್ತೇವೆ, ಇಂದು ದುಬೈಗೆ ಪಾರ್ಸಲ್ ಮಾಡುತ್ತೇವೆಟಿ ಎಂದು ಬೆದರಿಕೆ ಹಾಕಿ ಕರೆ ಕಡಿತಗೊಳಿಸಿದ್ದಾನೆ ಎಂದು ಕುಟುಂಬಸ್ಥರು ಆರೋಪಿಸಿದರು.

ಮಾರನೇ ದಿನ ಬೆಳಿಗ್ಗೆ 8 ಗಂಟೆಗೆ ಜೀವನ್ ಕುಮಾರ್ ಅವರ ಮೊಬೈಲ್‌ಗೆ ಕರೆ ಮಾಡಿದಾಗ, ಮೋಹನ್ ಸ್ವೀಕರಿಸಿ, ನಾವು ನಾರ್ವೆಯಲ್ಲಿ ಇದ್ದೇವೆ, ಕರೆ ಮಾಡಿ ತೊಂದರೆ ಕೊಡಬೇಡಿ. ರಾತ್ರಿಯಿಂದ ನಿಮ್ಮ ಮಗನ ಮೊಬೈಲ್ ನನ್ನ ಬಳಿಯೇ ಇತ್ತು, ಈಗ ಅವನಿಗೆ ಮತ್ತೊಂದು ಮೊಬೈಲ್ ಕೊಟ್ಟಿದ್ದೇನೆ ಎಂದು ಹೇಳಿ ಮೊಬೈಲ್ ಸ್ವಿಚ್ ಆಫ್ ಮಾಡಿದ್ದಾನೆ ಎಂದು ತಿಳಿಸಿದ್ದಾರೆ.

ಇದಾದ ನಂತರ ಬೆಳಿಗ್ಗೆ ಸುಮಾರು 9.30ಕ್ಕೆ ಪರಿಚಿತ ಮದನ್ ಅವರು ಜೀವನ್ ಕುಮಾರ್ ಅವರ ಅಕ್ಕ ದಾಕ್ಷಾಯಿಣಿಗೆ ಕರೆ ಮಾಡಿ, ಸಕಲೇಶಪುರ ಪಟ್ಟಣದ ತೇಜಸ್ವಿ ಸರ್ಕಲ್ ಸಮೀಪದ ಹೇಮಗಂಗಾ ಬಿಲ್ಡಿಂಗ್‌ನಲ್ಲಿರುವ ಎಸ್.ಆರ್. ಶಾಮಿಯಾನ ಅಂಗಡಿ ಪಕ್ಕದ ಮೆಟ್ಟಿಲುಗಳ ಮೇಲೆ ಜೀವನ್ ಕುಮಾರ್ ಮೃತ ಸ್ಥಿತಿಯಲ್ಲಿ ಬಿದ್ದಿರುವ ಬಗ್ಗೆ ಮಾಹಿತಿ ನೀಡಿದರು.

ಸ್ಥಳಕ್ಕೆ ತೆರಳಿದ ಕುಟುಂಬಸ್ಥರು, ತಲೆ ಹಾಗೂ ಕೈಗಳಲ್ಲಿ ಗಾಯಗಳಿರುವುದನ್ನು ಗಮನಿಸಿದ್ದೇವೆ. ಆದರೆ ಅಂಬುಲೆನ್ಸ್ ಸಿಬ್ಬಂದಿ ದೇಹವನ್ನು ಪರಿಶೀಲಿಸಲು ಅವಕಾಶ ನೀಡದೇ, ಸರ್ಕಾರಿ ಕ್ರಾಫರ್ಡ್ ಆಸ್ಪತ್ರೆಗೆ ಕರೆದೊಯ್ದರು ಎಂದು ದೂರಿದರು. ನಂತರ ಮರಣೋತ್ತರ ಪರೀಕ್ಷೆ ನಡೆಸಿ, ಸಕಲೇಶಪುರ ನಗರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿ, ಮಠಸಾಗರ ಗ್ರಾಮದ ಸ್ವಂತ ಜಾಗದಲ್ಲಿ ಅಂತ್ಯಕ್ರಿಯೆ ನೆರವೇರಿಸಲಾಗಿದೆ ಎಂದು ತಿಳಿಸಿದರು.

ಮೃತನ ಬಳಿ ಎರಡು ಮೊಬೈಲ್‌ಗಳಿದ್ದರೂ, ಶವ ದೊರೆತ ವೇಳೆ ಪ್ಯಾಂಟ್ ಜೇಬಿನಲ್ಲಿ ಒಂದೇ ಮೊಬೈಲ್ ಮಾತ್ರ ಸಿಕ್ಕಿದ್ದು ಅನುಮಾನಕ್ಕೆ ಕಾರಣವಾಗಿದೆ. ಜೀವನ್ ಕುಮಾರ್ ಅವರೊಂದಿಗೆ ಇದ್ದ ಸ್ನೇಹಿತರು ಸೇರಿ ಕೊಲೆ ನಡೆಸಿರುವ ಶಂಕೆ ವ್ಯಕ್ತವಾಗುತ್ತಿದ್ದು, ಪೊಲೀಸರು ಸಮರ್ಪಕ ತನಿಖೆ ನಡೆಸುತ್ತಿಲ್ಲ ಎಂದು ಆರೋಪಿಸಿದರು.

## ಪುತ್ರನಿಂದ ಹಲ್ಲೆಗೀಡಾದ ತಾಯಿ ಮೃತ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಮಾನಸಿಕ ಅಸ್ವಸ್ಥ ಪುತ್ರನಿಂದ ಹಲ್ಲೆಗೆ ಒಳಗಾಗಿದ್ದ ತಾಯಿ ಚಿಕಿತ್ಸೆ ಫಲಿಸದೆ ಬುಧವಾರ ಮೃತಪಟ್ಟಿದ್ದಾರೆ.

ಶ್ರವಣಬೆಳಗೊಳದ ಗಂಗಮ್ಮ (62) ಮೃತರು. ಪುತ್ರ ಉಮಾಶಂಕರ್ ಮಾ. 26ರಂದು ಮನೆಯಲ್ಲಿ ಜಗಳವಾಡಿ ತಲೆ ಮೇಲೆ ಕಲ್ಲು ಎತ್ತಿ ಹಾಕಿದ್ದ. ಅವರನ್ನು ಹಾಸನದ ಹಿಮ್ಸ್‌ಗೆ ದಾಖಲಿಸಲಾಗಿತ್ತು.

ಕಳೆದ ವರ್ಷ ನಡೆದ ಕುಂಭಮೇಳಕ್ಕೆ ಸ್ನೇಹಿತರೊಂದಿಗೆ ಕಾರಿನಲ್ಲಿ ತೆರಳಿದ್ದ ಉಮಾಶಂಕರ್ ವಾಪಸ್ ಬರುವಾಗ ಅಪಘಾತದಲ್ಲಿ ಗಾಯಗೊಂಡಿದ್ದ. ತಲೆಗೆ ಬಲವಾದ ಪೆಟ್ಟು ಬಿದ್ದಿದ್ದರಿಂದ 10 ದಿನಗಳ ಚಿಕಿತ್ಸೆ ಬಳಿಕ ಉಮಾಶಂಕರ್ ಚೇತರಿಸಿಕೊಂಡಿದ್ದನಾದರೂ ಮಾನಸಿಕವಾಗಿ ಅಸ್ವಸ್ಥನಾಗಿದ್ದ ಎನ್ನಲಾಗಿದೆ.

ಇತ್ತೀಚೆಗೆ ಮಾತ್ರೆಗಳನ್ನು ಸರಿಯಾಗಿ ಸೇವಿಸದ ಕಾರಣ ಬುದ್ಧಿ ಭ್ರಮಣೆಯಾದಂತೆ ಕಾಣುತ್ತಿದ್ದ. ಅಲ್ಲದೆ ಮದುವೆ ಮಾಡು ಎಂದು ತಾಯಿ ಮತ್ತು ಸಂಬಂಧಿಕರನ್ನು ಪೀಡಿಸುತ್ತಿದ್ದ. ಆದರೆ, ಅನಾರೋಗ್ಯದಿಂದ ಚಿಕಿತ್ಸೆ ಪಡೆಯುತ್ತಿದ್ದ ಆತನಿಗೆ ಹೆಣ್ಣು ಕೊಡಲು ಯಾರೂ ಮುಂದಾಗದ ಹಿನ್ನೆಲೆಯಲ್ಲಿ ಮನೆಯಲ್ಲಿ ಇದೇ ವಿಚಾರಕ್ಕೆ ತಾಯಿ ಮತ್ತು ಮಗನ ನಡುವೆ ಗಲಾಟೆ ನಡೆದಿದೆ ಎಂದು ಕುಟುಂಬಸ್ಥರು ತಿಳಿಸಿದ್ದಾರೆ. ಶ್ರವಣಬೆಳಗೊಳ ಠಾಣೆ ಪೊಲೀಸರು ಉಮಾಶಂಕರ್‌ನನ್ನು ಬಂಧಿಸಿದ್ದಾರೆ.

## ಶಿವಕುಮಾರ ಸ್ವಾಮೀಜಿ ಮನುಕುಲಕ್ಕೆ ಮಾದರಿ: ಸಿಮೆಂಟ್ ಮಂಜು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ತ್ರಿವಿಧ ದಾಸೋಹದ ಮೂಲಕ ದೇಶದಲ್ಲಿ ಬಸವ ತತ್ವದ ಪ್ರಚುರಪಡಿಸಿದ ಕೀರ್ತಿ ಸಿದ್ದಗಂಗಾ ಮಠದ ಶ್ರೀ ಶಿವಕುಮಾರ ಸ್ವಾಮೀಜಿಗೆ ಸಲ್ಲುತ್ತದೆ ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.

ಬುಧವಾರ ತಾಲೂಕಿನ ಬೆಳಗೋಡು ಹೋಬಳಿ ವೀರಶೈವ ಲಿಂಗಾಯತ ಯುವ ಸೇನೆ ಘಟಕದಿಂದ ಬಾಗೆ ಗ್ರಾಮದಲ್ಲಿ ಆಯೋಜಿಸಿದ್ದ ಶಿವಕುಮಾರ ಸ್ವಾಮೀಜಿ 119ನೇ ಜನ್ಮ ದಿನೋತ್ಸವದಲ್ಲಿ ಮಾತನಾಡಿದರು.

ಶಿವಕುಮಾರ ಸ್ವಾಮೀಜಿ ತಮ್ಮ ಸಂಪೂರ್ಣ ಜೀವನವನ್ನು ಸಮಾಜ ಸೇವೆಗೆ ಅರ್ಪಿಸಿದ್ದರು. ಜಾತಿ-ಧರ್ಮ ಭೇದವಿಲ್ಲದೆ ಎಲ್ಲರಿಗೂ ಶಿಕ್ಷಣ ನೀಡಿದ ಅವರು, ಅನ್ನ, ವಸತಿ ಹಾಗೂ ವಿದ್ಯೆಗೆ ಹೆಚ್ಚಿನ ಪ್ರಾಮುಖ್ಯತೆ ನೀಡಿ ಸುಸ್ಥಿರ ಸಮಾಜ ನಿರ್ಮಾಣಕ್ಕೆ ಬುನಾದಿ ಹಾಕಿದರು ಎಂದು ಹೇಳಿದರು.



ಶ್ರೀಗಳು ದೈಹಿಕವಾಗಿ ನಮ್ಮೊಂದಿಗಿಲ್ಲದಿದ್ದರೂ ಅವರ ಆದರ್ಶಗಳು ಮತ್ತು ಚಿಂತನೆಗಳು ಸದಾ ಜೀವಂತವಾಗಿವೆ.

ಗಗನಕ್ಕೆ ಗಗನವೇ ಸಾಟಿ, ಸಾಗರಕ್ಕೆ ಸಾಗರವೇ ಉಪಮೆ ಎಂಬಂತೆ ಸೇವಾ ಕ್ಷೇತ್ರದಲ್ಲಿ ಶಿವಕುಮಾರ ಸ್ವಾಮೀಜಿಯವರಿಗೆ ಸಮಾನರಿಲ್ಲ ಎಂದು ಅಭಿಪ್ರಾಯಪಟ್ಟರು. ಸಂಕಲಾಪುರ ಮಠದ ಧರ್ಮರಾಜೇಂದ್ರ, ಸ್ವಾಮೀಜಿ ಸಾನಿಧ್ಯ ವಹಿಸಿದ್ದರು. ಮಲೆನಾಡು ರಕ್ಷಣಾ ಸೇನೆಯ ರಾಜ್ಯಾಧ್ಯಕ್ಷ ಸಾಗರ್ ಜಾನಕೆರೆ, ವೀರಶೈವ ಲಿಂಗಾಯತ ಯುವ ಸೇನೆಯ ಬೆಳಗೋಡು ಹೋಬಳಿ ಘಟಕದ ಅಧ್ಯಕ್ಷ ನಾಗೇಂದ್ರ ಹೊಸಕೊಪ್ಪಲು, ಬಿಜೆಪಿ ಮುಖಂಡರಾದ ಕೆ.ಎಲ್. ಜೈಪ್ರಕಾಶ್, ಯುವರಾಜ್, ಹರೀಶ್ ಕಾಡುಮಕ್ಕಿ, ಹರೀಶ್, ಬಿಜೆಪಿ ಶಕ್ತಿ ಕೇಂದ್ರದ ಅಧ್ಯಕ್ಷ ರಾಕೇಶ್ ಇತರರಿದ್ದರು.

## ದೃಢೀಕೃತ ಆಲೂಗೆಡ್ಡೆ ಬಿತ್ತನೆ ಬೀಜ ವಿತರಣೆಗೆ ಕ್ರಮ ವಹಿಸಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಗುಣಮಟ್ಟದ ಬಿತ್ತನೆ ಆಲೂಗೆಡ್ಡೆ ವಿತರಿಸುವ ನಿಟ್ಟಿನಲ್ಲಿ ಮಾದರಿಗಳನ್ನು ಪರಿಶೀಲಿಸಿ ಗುಣಮಟ್ಟವನ್ನು ಧೃಡೀಕರಿಸಲು ಏಜೆನ್ಸಿ ನೇಮಕ ಮಾಡುವಂತೆ ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಸೂಚಿಸಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಬುಧವಾರ ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ ಸಲಹಾ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು, ವರ್ತಕರು ಆಲೂಗೆಡ್ಡೆ ಮಾರಾಟ ಮಾಡುವ ಸಂದರ್ಭದಲ್ಲಿ ಬಿಲ್‌ನಲ್ಲಿ ದೃಢೀಕೃತ ಬಿತ್ತನೆ ಬೀಜ ಎಂದು ನಮೂದಿಸಬೇಕು. ಯಾವ ಕಾರಣಕ್ಕೂ ಈ ನಿಯಮದಿಂದ ತಪ್ಪಿಸಿಕೊಳ್ಳಬಾರದು. ರೈತರ ಹಿತದೃಷ್ಟಿಯಿಂದ ಜಿಲ್ಲಾಡಳಿತ ಜಾರಿಗೊಳಿಸುವ ನಿಯಮಗಳನ್ನು ಪಾಲಿಸಬೇಕೆಂದು ಸೂಚಿಸಿದರು.



ರೈತರಿಗೆ ಅನುಕೂಲವಾಗುವಂತೆ ಗುಣಮಟ್ಟವನ್ನು ಕಾಯ್ದುಕೊಳ್ಳುವ ನಿಟ್ಟಿನಲ್ಲಿ ಬಿತ್ತನೆ ಆಲೂಗೆಡ್ಡೆ ಬೀಜವನ್ನು ಕಡ್ಡಾಯವಾಗಿ ಕೃಷಿ ಉತ್ಪನ್ನ ಮಾರುಕಟ್ಟೆ ಪ್ರಾಂಗಣದಲ್ಲಿ ಮಾರಾಟ ಮಾಡಲು ಕ್ರಮ ವಹಿಸಬೇಕು. ಶೀತಲ ಗೃಹಗಳಲ್ಲಿ ಬಿತ್ತನೆ ಬೀಜವನ್ನು ವ್ಯವಸ್ಥಿತವಾಗಿ ಶೇಖರಣೆ ಮಾಡಲು ಕ್ರಮ ವಹಿಸಬೇಕು. ಜಿಲ್ಲೆಯಲ್ಲಿ ಆಲೂಗೆಡ್ಡೆ ಬಿತ್ತನೆ ಪ್ರದೇಶ ಹೆಚ್ಚಿಸಲು ರೈತರಿಗೆ ಉತ್ತೇಜನ ನೀಡಿ ವಿಸ್ತರಣೆ ಮಾಡಲು ಕ್ರಮ ಕೈಗೊಳ್ಳಬೇಕು ಎಂದರು.

ಆಲೂಗಡ್ಡೆ ಬೆಳೆಯಲ್ಲಿ ವೈಜ್ಞಾನಿಕತೆ ಅಳವಡಿಕೊಂಡರೆ ರೈತರು ಲಾಭ ಹೊಂದಬಹುದು. ಆ ಉದ್ದೇಶದಿಂದ ತೋಟಗಾರಿಕೆ ಇಲಾಖೆ ಹತ್ತು ಹಲವು ಕಾರ್ಯಕ್ರಮ ಹಮ್ಮಿಕೊಂಡಿದೆ. ರಾಜ್ಯ ಮಟ್ಟದ ಆಲೂಗೆಡ್ಡೆ ಮೇಳ, ಕಾರ್ಯಾಗಾರಗಳನ್ನು ಹಮ್ಮಿಕೊಳ್ಳುವುದು ಒಳ್ಳೆಯ ಪ್ರಯತ್ನವಾಗಿದೆ ಎಂದರು.

ಆಲೂಗೆಡ್ಡೆ ಬೆಳೆಯಲು ಒಂದು ಎಕರೆಗೆ ವಿಮೆ ಸೇರಿ ವೆಚ್ಚವಾಗುವ ಕನಿಷ್ಟ ಹಾಗು ಗರಿಷ್ಟ ವೆಚ್ಚದ ಅಂದಾಜು ಪಟ್ಟಿಯನ್ನು ತಯಾರಿಸಿ ತಾಂತ್ರಿಕ ತಂಡದೊಂದಿಗೆ ಚರ್ಚಿಸಿ ವೆಚ್ಚ ಕಡಿಮೆ ಮಾಡಲು ಅಧಿಕಾರಿಗಳಿಗೆ ಸೂಚಿಸಿದರು.

ತೋಟಗಾರಿಕೆ ಇಲಾಖೆ ಉಪ ನಿರ್ದೇಶಕ ಯೋಗೇಶ್, ಜಿಲ್ಲಾ ಮಟ್ಟದ ಅಧಿಕಾರಿಗಳು, ರೈತ ಮುಖಂಡರು, ವರ್ತಕರು ಭಾಗವಹಿಸಿದ್ದರು.

# ಅಡುಗೆ ಅನಿಲಕ್ಕೆ ಭಾರೀ ಬೇಡಿಕೆ: ಕೃತಕ ಅಭಾವ ಸೃಷ್ಟಿ

## ಹಗಲು ದರೋಡೆ ನಡೆಸುತ್ತಿವೆ ಏಜೆನ್ಸಿಗಳು | ಸಾರ್ವಜನಿಕರ ಗಂಭೀರ ಆರೋಪ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಮಧ್ಯ ಪ್ರಾಚ್ಯರಾಷ್ಟ್ರಗಳಲ್ಲಿ ನಡೆಯುತ್ತಿರುವ ಯುದ್ಧದ ಪರಿಣಾಮ ಅಡುಗೆ ಅನಿಲ ಪೂರೈಕೆಯಲ್ಲಿ ಭಾರೀ ವ್ಯತ್ಯಯ ಉಂಟಾಗಿದೆ. ಗೃಹ ಬಳಕೆ ಅಡುಗೆ ಅನಿಲಕ್ಕೆ ಇದೀಗ ಭಾರೀ ಬೇಡಿಕೆ ಸೃಷ್ಟಿಯಾಗಿದೆ.

ವಾಣಿಜ್ಯ ಉದ್ದೇಶದ ಸಿಲಿಂಡರ್‌ಗಳ ಪೂರೈಕೆಗೆ ನಿಯಂತ್ರಣ ವಿಧಿಸಿರುವುದರಿಂದ ಹೆಚ್ಚಿನ ದರ ಕೊಟ್ಟು ಗೃಹ ಬಳಕೆ ಸಿಲಿಂಡರ್‌ಗಳನ್ನು ಖರೀದಿಸಲು ಹೋಟೆಲ್, ಬೇಕರಿ, ಟೀ-ಕಾಫೀ ಅಂಗಡಿ ಮಾಲೀಕರು ಮುಗಿಬಿದ್ದಿದ್ದಾರೆ.

ಗೃಹ ಬಳಕೆ ಅಡುಗೆ ಅನಿಲ ಸಂಪರ್ಕ ಹೊಂದಿರುವವರು ವಾಣಿಜ್ಯ ಉದ್ದೇಶಕ್ಕೆ ಸಿಲಿಂಡರ್‌ಗಳನ್ನು ನೀಡುತ್ತಿದ್ದುದು ಈಗ ಹೊಸದೇನಲ್ಲ. ಅದು ಹಿಂದಿನಿಂದಲೂ ನಡೆದುಕೊಂಡು ಬಂದಿದೆ. 917 ರೂ.ನ ಅಡುಗೆ ಅನಿಲ ಸಿಲಿಂಡರ್ ಅನ್ನು ಹೋಟೆಲ್, ಬೇಕರಿ ಅಥವಾ ಇನ್ನಿತರ ವಾಣಿಜ್ಯ ಉದ್ದೇಶದವರಿಗೆ ನೀಡಿ ಅವರಿಂದ 1200 ರಿಂದ 1300 ರೂ. ವರೆಗೆ ಹಣ ಪಡೆಯುತ್ತಿದ್ದರು. ಈಗ ಅದರ ಪ್ರಮಾಣ ಕಡಿಮೆಯಾಗಿದ್ದರೂ ಸಿಲಿಂಡರ್ ಬಳಕೆ ಕಡಿಮೆ ಇರುವ ಹಾಗೂ ಡಬಲ್ ಸಿಲಿಂಡರ್ ಹೊಂದಿರುವ ಗ್ರಾಹಕರು ಹೆಚ್ಚಿನ ದರಕ್ಕೆ ಒಂದು ಸಿಲಿಂಡರ್ ಕೊಟ್ಟು ಒಂದೇ ಒಂದು ಸಿಲಿಂಡರ್‌ನಲ್ಲಿ ಅಡುಗೆ ಮಾಡಿ ಲಾಭ ಮಾಡಿಕೊಳ್ಳುವಲ್ಲಿ ನಿರತರಾಗಿದ್ದಾರೆ. ಗೃಹ ಬಳಕೆ ಸಿಲಿಂಡರ್ ಗಳ ಬುಕ್ಕಿಂಗ್ ಅವಧಿಯನ್ನು ಗ್ರಾಮಾಂತರ ಪ್ರದೇಶಕ್ಕೆ 45 ದಿನ ಹಾಗೂ ನಗರ ಪ್ರದೇಶಕ್ಕೆ 25 ದಿನಗಳಿಗೆ ನಿಗದಿಪಡಿಸಲಾಗಿದೆ. ಇದರಲ್ಲೂ ಗೃಹ



ಬಳಕೆಗೆ ಸಿಗುತ್ತಿರುವ ಅಡುಗೆ ಅನಿಲ ಪ್ರಮಾಣ ಕಡಿಮೆಯಾಗಿದೆ ಎಂದು ತಿಳಿದುಬಂದಿದೆ.

**ಬುಕ್ ಮಾಡಿದವರ ಕಣ್ತಪ್ಪಿಸಿ ಮಾರಾಟ**

ಇದೀಗ ಅಡುಗೆ ಅನಿಲ ಬಿಕ್ಕಟ್ಟಿನ ಸಮಯದಲ್ಲೂ ವಾಮಮಾರ್ಗದಲ್ಲಿ ವಾಣಿಜ್ಯ ಉದ್ದೇಶಕ್ಕೆ ಗೃಹ ಬಳಕೆ ಸಿಲಿಂಡರ್‌ಗಳು ಮಾರಾಟವಾಗುತ್ತಿವೆ. ಒಂದು ಸಿಲಿಂಡರ್‌ಗೆ 1500 ರೂ. ವರೆಗೆ ಹೋಟೆಲ್, ಬೇಕರಿ, ಆಟೋ ಮಾಲೀಕರು ಹಣ ಕೊಟ್ಟು ಖರೀದಿಸುತ್ತಿದ್ದಾರೆ. ನಿತ್ಯ ನಾಲ್ಕೈದು ಸಿಲಿಂಡರ್‌ಗಳ ಅವಶ್ಯಕತೆ ಇರುವ ಹೋಟೆಲ್ ಮಾಲೀಕರು ಸದ್ಯಕ್ಕೆ ಸಿಗುತ್ತಿರುವ ಗೃಹ ಬಳಕ ಸಿಲಿಂಡರ್‌ಗಳನ್ನು ವಾಣಿಜ್ಯ ಉದ್ದೇಶದತ್ತ ಸೆಳೆಯುವ ಪ್ರಯತ್ನ ನಡೆಸಿದ್ದು ಅದರಲ್ಲಿ ಸಫಲತೆಯನ್ನೂ ಕಂಡಿದ್ದಾರೆ.

ಪ್ರಸ್ತುತ ಸನ್ನಿವೇಶದಲ್ಲಿ ಗೃಹ ಬಳಕೆಯ ಸಿಲಿಂಡರ್‌ಗಳು ಗ್ರಾಹಕರ ಹೆಸರಿನಲ್ಲಿ ವಾಣಿಜ್ಯೋದ್ಯಮಿಗಳ ಕೈಸೇರುತ್ತಿದೆ. ಇದನ್ನು ತಡೆಯುವುದಕ್ಕೆ ಯಾರಿಂದಲೂ ಸಾಧ್ಯವಾಗುತ್ತಿಲ್ಲ. ಸಿಲಿಂಡರ್ ಬುಕ್ ಮಾಡಿದ ಗ್ರಾಹಕರನ್ನೇ ಯಾಮಾರಿಸಿ ವಾಣಿಜ್ಯ ಉದ್ದೇಶಗಳಿಗೆ ನೀಡುತ್ತಿರುವುದು ಅಲ್ಲಲ್ಲಿ ವರದಿಯಾಗುತ್ತಿವೆ.

ಪಟ್ಟಣದ ಬಾಗೂರು ರಸ್ತೆಯ ಗ್ರಾಹಕರೊಬ್ಬರು ಮಾ.25ರಂದು ಸಿಲಿಂಡರ್ ಬುಕ್ ಮಾಡಿದ್ದು, ಮಾ.26ಕ್ಕೆ ಅಡುಗೆ ಅನಿಲ ಸರಬರಾಜಿನ ಸಂದೇಶ ಬರುತ್ತದೆ. ಡೆಲಿವರಿ ಕೋಡ್, ಒಟಿಪಿ ನೀಡದಿದ್ದರೂ ಸಹ ಅಡುಗೆ ಅನಿಲ ಸರಬರಾಜಾಗಿರುವ ಬಗ್ಗೆ ಮಾ.27ಕ್ಕೆ ಅಡುಗೆ ಅನಿಲ ಬುಕ್ ಮಾಡಿದ ಗ್ರಾಹಕರ ಮೊಬೈಲ್ ಗೆ ಸಂದಣಿ ಬರುತ್ತದೆ. ಹಾಗಾದರೆ ಓಟಿಪಿ, ಡೆಲಿವರಿ ಕೋಡ್ ನ್ನು ಏಜೆನ್ಸಿಯವರಿಗೆ ನೀಡಿದವರು ಯಾರು. ಈ ಬಗ್ಗೆ ತಿಳಿಯಲು ಗ್ಯಾಸ್ ಏಜೆನ್ಸಿಯವರಿಗೆ ಕರೆ ಮಾಡಿದರೆ ನಮಗೆ ಗೊತ್ತಿಲ್ಲವೆಂಬ ಸಿದ್ಧ ಉತ್ತರ ನೀಡಿದ್ದಾರೆ.

**ಬಾಗಿಲು ಮುಚ್ಚಿ ಏಜೆನ್ಸಿಗಳ ಕೆಲಸ**

ಅಡುಗೆ ಅನಿಲ ಪೂರೈಕೆಯಲ್ಲಾಗಿರುವ ವ್ಯತ್ಯಯದಿಂದ ಗ್ರಾಹಕರಿಗೆ ಉತ್ತರಿಸಲಾಗದೆ ಗ್ಯಾಸ್ ಏಜೆನ್ಸಿ ಸಿಬ್ಬಂದಿ ಬಾಗಿಲು ಮುಚ್ಚಿಕೊಂಡು ಕೆಲಸ ನಿರ್ವಹಿಸುತ್ತಿದ್ದಾರೆ.

ಗ್ಯಾಸ್ ಬುಕ್ಕಿಂಗ್ ಮಾಡಿದವರಿಗೆ ನಿಗದಿತ ಅವಧಿ ಮುಗಿದರೂ ಅಡುಗೆ ಅನಿಲ ಪೂರೈಕೆಯಾಗದಿರುವ ಬಗ್ಗೆ ಕೇಳಲು ಬರುವ ಗ್ರಾಹಕರಿಂದ ತಪ್ಪಿಸಿಕೊಳ್ಳಲು ಏಜೆನ್ಸಿ ಗಳ ನೌಕರರು, ಸಿಬ್ಬಂದಿ ಕಣ್ಣಾಮುಚ್ಚಾಲೆ ಆಟವಾಡುತ್ತಿದ್ದಾರೆ. ಹೊರಗಡೆ ಒಬ್ಬ ಸಿಬ್ಬಂದಿಯನ್ನು ನಿಲ್ಲಿಸಿ ಗ್ಯಾಸ್ ಸಮಸ್ಯೆ ಹೇಳಿಕೊಂಡು ಬರುವವರಿಗೆ ಅಂಗಡಿಯಲ್ಲಿ ಯಾರೂ ಇಲ್ಲವೆಂದು ಹೇಳಿ ಕಳುಹಿಸುತ್ತಿದರೆ, ಇತರೆ ಉದ್ದೇಶಗಳಿಗೆ ಬರುವವರನ್ನು ಮಾತ್ರ ಪ್ರವೇಶಾವಕಾಶ ನೀಡಿ ಕಾರ್ಯನಿರ್ವಹಿಸುತ್ತಿದ್ದಾರೆ.

ವಾಣಿಜ್ಯ ಬಳಕೆಯ ಅಡುಗೆ ಅನಿಲ ಪೂರೈಕೆಯಲ್ಲಿ ವ್ಯತ್ಯಯವಾಗಿರುವ ಹಿನ್ನಲೆಯಲ್ಲಿ ಎಲ್‌ಪಿಜಿ ಆಟೋ ದರ, ಕೆಲವು ಹೋಟೆಲ್‌ಗಳಲ್ಲಿ ಕಾಫೀ-ಟೀ, ತಿಂಡಿ, ಊಟದ ದರದಲ್ಲಿ ಕೊಂಚ ಏರಿಕೆ ಮಾಡಲಾಗಿದೆ. ಎಲ್.ಪಿ.ಜಿ. ಆಟೋಗಳು ನಿಗದಿತ ದರಕ್ಕಿಂತ 10 ರು. ಹೆಚ್ಚು ಪಡೆದರೆ, ಕಾಫೀ-ಟೀ ದರದಲ್ಲಿ ಕನಿಷ್ಠ 5 ರೂ., ಊಟ-ತಿಂಡಿ ದರವನ್ನು ಹೆಚ್ಚಿಸಿದ್ದಾರೆ. ಕೆಲವು ಹೋಟೆಲ್ ನವರು ದರ ಹೆಚ್ಚಿಸದಿದ್ದರೂ ಮೊದಲು ನೀಡುತ್ತಿದ್ದ ತಿಂಡಿ-ಊಟದ ಪ್ರಮಾಣವನ್ನು ಕಡಿಮೆ ಮಾಡಿರುವುದು ಕಂಡುಬರುತ್ತಿದೆ. ಕೆಲವು ಹೋಟೆಲ್ ಹಾಗೂ ಬೇಕರಿ ಅಂಗಡಿ ಮಾಲೀಕರು ಅಡುಗೆ ಅನಿಲಕ್ಕೇ ಕಾಯದೆ ಕಟ್ಟಿಗೆ ಒಲೆಯಲ್ಲಿ ಅಡುಗೆ, ಬೇಕರಿ ತಿಂಡಿ-ತಿನಿಸುಗಳನ್ನು ತಯಾರಿಸಲು ಆರಂಭಿಸಿದ್ದಾರೆ. ಮರದ ಹೊಟ್ಟು, ಕಟ್ಟಿಗೆಯನ್ನು ಬಳಸಿ ಪರಿಸ್ಥಿತಿಯನ್ನು ಹತೋಟಿಯಲ್ಲಿಡುವ ಪ್ರಯತ್ನದಲ್ಲಿ ಮುಂದುವರೆದಿದ್ದಾರೆ.

# ಅರಕಲಗೂಡಿನಿಂದ ಧರ್ಮಸ್ಥಳಕ್ಕೆ ಬಸ್ ಸೌಲಭ್ಯ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಕಲಗೂಡು: ಪುಣ್ಯ ಕ್ಷೇತ್ರ ಧರ್ಮಸ್ಥಳ ಹಾಗೂ ಕುಕ್ಕೆ ಸುಬ್ರಹ್ಮಣ್ಯ ಕ್ಷೇತ್ರದ ದರ್ಶನಕ್ಕೆ ಅನುಕೂಲವಾಗುವಂತೆ ಧರ್ಮಸ್ಥಳದಿಂದ ಮೈಸೂರಿಗೆ ನೇರ ಬಸ್ ವ್ಯವಸ್ಥೆಯನ್ನು ಕಲ್ಪಿಸಲಾಗಿರುವುದನ್ನು ಸ್ವಾಗತಿಸಿ ಸಂತೆಮರೂರು ಗ್ರಾಮಸ್ಥರು ನೂತನ ಬಸ್‌ಗೆ ಪೂಜೆ ಸಲ್ಲಿಸಿ ಸಂಭ್ರಮಿಸಿದರು.

ಬಸ್‌ಗೆ ಹೂವಿನ ಅಲಂಕಾರಗೊಳಿಸಿ ಪೂಜೆ ಸಲ್ಲಿಸಿದರು. ಅಲ್ಲದೆ ಕೆಲವರು ಬಸ್ ಏರಿ ಸುಬ್ರಹ್ಮಣ್ಯ, ಧರ್ಮಸ್ಥಳಕ್ಕೆ ಪ್ರಯಾಣ ಕೂಡ ಆರಂಭಿಸಿದರು.

ಈ ನೂತ ಬಸ್ ನಿತ್ಯವೂ ಬಿಸಿಲೆ ಘಾಟ್ ಮೂಲಕ ಅರಕಲಗೂಡು ಸಂತೆಮರೂರು, ಜೋಡಿಗುಬ್ಬಿ, ಹಳ್ಳಿಮೈಸೂರು, ಭೇರ್ಯ, ಕೆ.ಆರ್.ಮಾರ್ಗವಾಗಿ ಮೈಸೂರಿಗೆ ತೆರಳಲಿ ತಂಗಲಿದೆ. ಬೆಳಿಗ್ಗೆ 6 ಗಂಟೆಗೆ ಮೈಸೂರಿನಿಂದ ಹೊರಟು ಅದೇ ಮಾರ್ಗವಾಗಿ ಸಂಚರಿಸಿ ಕುಕ್ಕೆ ಸುಬ್ರಹ್ಮಣ್ಯ ಮೂಲಕ ಧರ್ಮಸ್ಥಳಕ್ಕೆ ತೆರಳಲಿದೆ. ನಿತ್ಯವೂ ತಾಲೂಕಿನಿಂದ ಕುಕ್ಕೆ ಸುಬ್ರಹ್ಮಣ್ಯ, ಧರ್ಮಸ್ಥಳಕ್ಕೆ ಪ್ರಯಾಣಿಕರು ಹೋಗಿಬರುತ್ತಿದ್ದು, ಈ ನೂತನ ಸಾರಿಗೆ ಬಸ್ ಅತೀ ಸಮೀಪ ಮಾರ್ಗದಲ್ಲಿ ಇರುವ ಕಾರಣ ಹೆಚ್ಚಿನ ಪ್ರಯಾಣಿಕರು ಈ ಬಸ್ ಸೌಲಭ್ಯವನ್ನು ಪಡೆಯಲು ಅವಕಾಶ ದೊರೆತಂತೆ ಆಗಿದೆ ಎಂದು ಪ್ರಯಾಣಿಕರು ಸಂತಸ ವ್ಯಕ್ತಪಡಿಸಿದರು.

ಅರಕಲಗೂಡಿನಿಂದ ಸಂತೆಮರೂರು-ಜೋಡಿಗುಬ್ಬಿ,ಹಳ್ಳಿಮೈಸೂರು ಮಾರ್ಗವಾಗಿ ಮೈಸೂರಿಗೆ ತೆರಳಲು ಸಕಾಲಿಕವಾಗಿ ಸಾರಿಗೆ ಬಸ್ ಸೇವೆಯಿಂದ ತ್ಯಾಗದ ಹತ್ತಾರು ಹಳ್ಳಿಗಳ ಜನರು ವಂಚನೆಗೊಂಡಿದ್ದರು. ಈ ಮಾರ್ಗ ಅರಕಲಗೂಡಿನಿಂದ ಮೈಸೂರಿಗೆ ಸಂಚರಿಸುವ ಪ್ರಯಾಣಿಕರಿಗೆ ಅತೀ ಸಮೀಪವಾಗಿತ್ತು. ಅಲ್ಲದೆ ಬೆಳಕಿನ ವೇಳೆ ಬಿಸಿಲೆ ಘಾಟ್ ಸೌಂದರ್ಯವನ್ನು ಸವಿಯಲು ಮತ್ತೊಂದು ಅವಕಾಶ ದೊರೆತಂತಾಗಿದೆ. ಈ ಅವಕಾಶ ಮತ್ತು ಪ್ರಯಾಣಿಕರ ಸಮಸ್ಯೆಗೆ ಪರಿಹಾರ ಒದಗಿಸಿರುವ ಸಾರಿಗೆ ಸಂಸ್ಥೆ ಅಧಿಕಾರಿಗಳನ್ನು ಇಡೀ ಪ್ರಯಾಣಿಕರ ಪರವಾಗಿ ಸಂತೆಮರೂರು ಗ್ರಾಮಸ್ಥರು ಅಭಿನಂದಿಸುತ್ತೇವೆ ಎಂದರು.

ಮುಖಂಡರಾದ ಶಾಂತರಾಜೇ ಅರಸು, ಮಲ್ಲರಾಜೇ ಅರಸು, ಕಾರ್ತಿಕ ಅರಸು, ಬಾಲರಾಜೇ ಅರಸು ಇತರರು ಇದ್ದರು.

# ಉಚ್ಚಂಗಿಯಲ್ಲಿ ರಾಮೋತ್ಸವ ಶತಮಾನೋತ್ಸವ ಸಂಭ್ರಮ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ತಾಲೂಕಿನ ಉಚ್ಚಂಗಿ ಗ್ರಾಮದ ಶ್ರೀ ರಾಮಸೇವಾ ಸಮಿತಿ ವತಿಯಿಂದ ಪ್ರಸನ್ನ ರಾಮೇಶ್ವರಸ್ವಾಮಿ ದೇವಾಲಯದಲ್ಲಿ ಶ್ರೀ ರಾಮೋತ್ಸವ ಶತಮಾನೋತ್ಸವ ಮತ್ತು ರುದ್ರ ಹೋಮ ಮಾರ್ಚ್ 27 ರಿಂದ ಏ. 6ರ ವರೆಗೆ ಆಯೋಜಿಸಲಾಗಿದೆ.

ಏ. 4 ಹಾಗೂ 5 ರಂದು ಶೃಂಗೇರಿಯ ಶ್ರೀ ವಿಧುಶೇಖರಭಾರತೀ ಸ್ವಾಮೀಜಿ ಹಾಗೂ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಪಾಲ್ಗೊಳ್ಳಲಿದ್ದಾರೆ.

ಏಪ್ರಿಲ್ 6ರ ಸೋಮವಾರದ ವರೆಗೆ ಪ್ರತಿದಿನ ಮುಂಜಾನೆ ಸುಪ್ರಭಾತ ಸೇವೆ, ಗಣಪತಿ ಪೂಜೆ, ಗುರುಪಾದುಕಾ ಪೂಜೆ, ನವಗ್ರಹ ಪೂಜೆ, ಶ್ರೀ ರಾಮೇಶ್ವರ ಸ್ವಾಮಿಗೆ ಫಲಪಂಚಾಮೃತ ಅಭಿಷೇಕ, ರುದ್ರಾಭಿಷೇಕ, ಸಹಸ್ರನಾಮಾರ್ಚನೆ, ಮಧ್ಯಾಹ್ನ 1 ಗಂಟೆಗೆ ಮಹಾಮಂಗಳಾರತಿ,



ತೀರ್ಥ ಪ್ರಸಾದ ವಿನಿಯೋಗ ಇರುತ್ತದೆ. ಗೋಧೂಳಿ ಲಗ್ನದಲ್ಲಿ ಭಜನೆ, ಸಾಂಸ್ಕೃತಿಕ ಕಾರ್ಯಕ್ರಮ, ಉತ್ಸವಾದಿಗಳು ನಡೆಯಲಿವೆ.

ಶ್ರೀ ರಾಮೋತ್ಸವ ಶತಮಾನೋತ್ಸವ ಅಂಗವಾಗಿ ಏ. 4 ರಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಉಪಸ್ಥಿತಿಯಲ್ಲಿ ಬೆಳಿಗ್ಗೆ 9.40 ರಿಂದ 10.10ರೊಳಗೆ ಸಲ್ಲುವ ಶುಭ ವೃಷಭ ಲಗ್ನದಲ್ಲಿ ಶ್ರೀ ರಾಮದೇವರ ಪಟ್ಟಾಭಿಷೇಕ, ಶ್ರೀ ಕೃಷ್ಣ ಗಂಧೋತ್ಸವ, ರಾಮದೇವರ ಮಹಾರಥೋತ್ಸವ ನಡೆಯಲಿದೆ. ಸಂಜೆ 5.30ಕ್ಕೆ ಗೋಧೂಳಿ ಲಗ್ನದಲ್ಲಿ ಶ್ರೀ ವಿಧುಶೇಖರಭಾರತೀ ಸನ್ನಿಧಾನಂಗಳವರ ಪುರಪ್ರವೇಶ, ಶೋಭಾಯಾತ್ರೆ, ಧೂಳೀಪಾದಪೂಜೆ, ಫಲಸಮರ್ಪಣೆ ರಾತ್ರಿ 8.00ಕ್ಕೆ ಜಗದ್ಗುರು ಸನ್ನಿಧಾನಂಗಳವರಿಂದ ಶ್ರೀ ಚಂದ್ರಮೌಳೀಶ್ವರ ಪೂಜೆ. ಸಂಜೆ 7.30ರಿಂದ 8 ಗಂಟೆಯ ತನಕ ಭಾರತದ ಸರ್ವೋಚ್ಚ ನ್ಯಾಯಾಲಯದ ನ್ಯಾಯಾಧೀಶರಾದ ಶ್ರೀ ಅರವಿಂದಕುಮಾರ್ ಅವರಿಂದ ಶ್ರೀರಾಮ-ಭಾರತೀಯ ಸನಾತನತೆಯ ಮೂರ್ತರೂಪ ಉದ್ಬೋಧನಾ ನುಡಿಪ್ರಧಾನ ಇರುತ್ತದೆ. ಏ. 5ರಂದು ಶ್ರೀ ಚಂದ್ರಶೇಖರ ಭಾರತೀ ಯಾಗಶಾಲೆಯಲ್ಲಿ ಪ್ರಾತಃಕಾಲ ಅರುಣ ಪಾರಾಯಣ, ಮಹಾನ್ಯಾಸಪೂರ್ವಕ ಶತರುದ್ರಾಭಿಷೇಕ, ರುದ್ರಹೋಮ ಪ್ರಾರಂಭ. ಶ್ರೀ ಪ್ರಸನ್ನರಾಮೇಶ್ವರನ ಸನ್ನಿಧಿಯಲ್ಲಿ ಬೆಳಗ್ಗೆ 9ಕ್ಕೆ ಪರಮಪೂಜ್ಯ ಸನ್ನಿಧಾನಂಗಳವರಿಂದ ವಿಶೇಷ ಅಭಿಷೇಕ, 11ಕ್ಕೆ ಪರಮಪೂಜ್ಯ ಜಗದ್ಗುರುಗಳ ದಿವ್ಯಸಾನ್ನಿಧ್ಯದಲ್ಲಿ ರುದ್ರೇಕಾದಶಿನಿಯ ಪೂರ್ಣಾಹುತಿ.

ಸಂಜೆ 5 ಗಂಟೆಗೆ ಪೂಜ್ಯ ಜಗದ್ಗುರುಗಳನ್ನು ಬೀಳ್ಕೊಡುವ ಕಾರ್ಯಕ್ರಮವಿರುತ್ತದೆ. ಏ. 6 ರಂದು ಹನುಮಂತೋತ್ಸವದೊಂದಿಗೆ ಪೂಜಾ ಮಹೋತ್ಸವ ಸಂಪನ್ನಗೊಳಲಿದೆ ಎಂದು ಆಡಳಿತ ಮಂಡಳಿ ಪ್ರಕಟಣೆಯಲ್ಲಿ ತಿಳಿಸಿದೆ.

# ನಾಳೆ ಚನ್ನರಾಯಪಟ್ಟಣದಲ್ಲಿ ವಸುದೈವ ಕುಟುಂಬಕಂ ಕಾರ್ಯಕ್ರಮ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಪಟ್ಟಣದ ಅಕ್ಷರ ಸ್ಕೂಲ್ ಆಫ್ ಎಕ್ಸಲೆನ್ಸ್ ಶಾಲೆಯಲ್ಲಿ ಏ.3ರ ಶುಕ್ರವಾರ ವಸುದೈವ ಕುಟುಂಬಕಂ ಎಂಬ ಸಾಂಸ್ಕೃತಿಕ ಕಾರ್ಯಕ್ರಮವನ್ನು ಶ್ರೀಲಂಕಾ ತಂಡವು ನಡೆಸಿಕೊಡಲಿದೆ ಎಂದು ಪತ್ರಕರ್ತರ ಸಂಘದ ರಾಜ್ಯ ಉಪಾಧ್ಯಕ್ಷ ಎಚ್.ಬಿ.ಮದನ್ ಗೌಡ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಬುಧವಾರ ಮಾತನಾಡಿ, ಏಷ್ಯಾ ಮೀಡಿಯಾ ಕಲ್ಚರಲ್ ಅಸೋಸಿಯೇಷನ್ ವತಿಯಿಂದ ಶ್ರೀಲಂಕಾದ ಫ್ಯೂಚರ್ ಲೀಡರ್ ಎಂಬ ಖಾಸಗಿ ಸಂಸ್ಥೆ ಶ್ರೀಲಂಕಾದ ತಂಡ ಚನ್ನರಾಯಪಟ್ಟಣದ ಅಕ್ಷರ ಶಾಲೆಯಲ್ಲಿ ಅಂತರಾಷ್ಟ್ರೀಯ ಮಟ್ಟದ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ ಎಂದರು.

ದೇಶದ ಸ್ಥಳೀಯ ಸಂಸ್ಕೃತಿಯನ್ನು ಬೇರೆ ದೇಶದಲ್ಲಿ ಪ್ರದರ್ಶನ, ಪ್ರಚುರ




ಪಡಿಸುವುದು ಹಾಗೂ ಆ ದೇಶದ ಸಾಂಸ್ಕೃತಿಕ ವೈಭವವನ್ನು ನಮ್ಮ ದೇಶದಲ್ಲಿ ಪ್ರಸ್ತುತ ಪಡಿಸುವುದು ಆಗಿರುತ್ತದೆ ಎಂದು ಹೇಳಿದರು.

ಸಂಪೂರ್ಣವಾಗಿ ಶ್ರೀಲಂಕಾ ತಂಡ ಸಾಂಸ್ಕೃತಿಕ ವಿನಿಮಯಕ್ಕಾಗಿ ಆಗಮಿಸಲಿದ್ದು ಮೂರು ದಿನಗಳ ಕಾಲ ನಮ್ಮ ದೇಶದಲ್ಲಿ ಉಳಿಯಲಿದ್ದಾರೆ. ನಮ್ಮ ರಾಜ್ಯದಲ್ಲಿ ಇದು ಮೊದಲನೇ ಕಾರ್ಯಕ್ರಮವಾಗಿದ್ದು ಇದೇ ರೀತಿ ನೇಪಾಳ, ಮಲೇಶಿಯಾ, ಮಯನ್ಮಾರ್, ಬಾಂಗ್ಲಾದೇಶ, ಪಾಕಿಸ್ತಾನ ದೇಶಗಳ ಸಾಂಸ್ಕೃತಿಕ ಕಾರ್ಯಕ್ರಮ ಕೂಡ ರಾಜ್ಯದ ಇತರೆ ಭಾಗಗಳಲ್ಲಿ ಮುಂದಿನ ದಿನಗಳಲ್ಲಿ ವಿನಿಮಯವಾಗಲಿವೆ ಎಂದರು.

ಅಕ್ಷರ ವಿದ್ಯಾಸಂಸ್ಥೆಯ ಪ್ರಾಂಶುಪಾಲ ಸುನಿಲ್ ಪ್ಯಾಟ್ರಿಕ್ ಮಾತನಾಡಿ, ಶ್ರೀಲಂಕಾ ತಂಡವು 40 ನಿಮಿಷಗಳ ಕಾಲ ಕಾರ್ಯಕ್ರಮ ಪ್ರಸ್ತುತ ಪಡಿಸಲಿದೆ. ಶಾಲೆಯ ವಿದ್ಯಾರ್ಥಿಗಳು ವಿಭಿನ್ನತೆಯಲ್ಲಿ ಏಕತೆ, ಶ್ರೀ ರಾಮಾಯಣ ದರ್ಶನಂ, ಯಕ್ಷಗಾನ, ಹುಲಿ ವೇಷ ಕುಣಿತ ಪ್ರದರ್ಶನ ಮಾಡಲಿದ್ದಾರೆ ಎಂದು ಮಾಹಿತಿ ನೀಡಿದರು.

ಸಂಸ್ಥೆಯ ಕಾರ್ಯದರ್ಶಿ ಅನಿಲ್ ಮರುಗೂರು ಮಾತನಾಡಿ, ಕಾರ್ಯಕ್ರಮದಲ್ಲಿ ಶಾಸಕರಾದ ಸಿ.ಎನ್. ಬಾಲಕೃಷ್ಣ, ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು, ಉಪಾಧ್ಯಕ್ಷ ಎಚ್. ಬಿ. ಮದನಗೌಡ, ಜಿಲ್ಲಾಧ್ಯಕ್ಷ ಜೆ.ಆರ್. ಕೆಂಚೇಗೌಡ, ವಿಜಯವಾಣಿ ಮೈಸೂರು ವಿಭಾಗದ ಸ್ಥಾನಿಕ ಸಂಪಾದಕ ಸತ್ಯನಾರಾಯಣ, ಫ್ಯೂಚರ್ ಲೀಡರ್ ಸಂಸ್ಥೆಯ ಪ್ರಿಯಾಂಗ ಬನಾರಾನಾಯಕ್, ಫ್ಯೂಚರ್ ಲೀಡರ್ ಸಂಸ್ಥೆಯ ಕಲ್ಚರಲ್ ಅಡ್ವೈಸರ್ ಉಪುಲ್ ಜೈಸಿಂಗೆ ಭಾಗವಹಿಸಲಿದ್ದಾರೆ ಎಂದರು.

ಅಕ್ಷರ ಸಂಸ್ಥೆಯ ಅಧ್ಯಕ್ಷೆ ಪಿ. ಸರೋಜಾದೇವಿ, ಖಜಾಂಚಿ ಚೇತನ್, ನಿರ್ದೇಶಕ ತಿರುಮಲ ಪ್ರಸಾದ್ ಹಾಗೂ ಶ್ರೀಲಂಕಾ ದೇಶದ ಸಂಗೀತ ನಿರ್ದೇಶಕರು, ನಾಯಕ ನಟ ವಿದ್ಯಾರ್ಥಿಗಳು ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಅಕ್ಷರ ಸಂಸ್ಥೆಯ ಖಜಾಂಚಿ ಸಿ.ಸಿ. ಚೇತನ್ ನಿರ್ದೇಶಕ ತಿರುಮಲ ಪ್ರಸಾದ್ ಪ್ರಾಂಶುಪಾಲರಾದ ಸುನಿಲ್ ಪ್ಯಾಟ್ರಿಕ್ ಭಾಗವಹಿಸಿದ್ದರು.

## ಜನಗಣತಿಗೆ ಸಹಕಾರ ನೀಡುವಂತೆ ಮನವಿ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಕೇಂದ್ರ ಸರ್ಕಾರ ಕೈಗೊಂಡಿರುವ 2027ರ ಜನಗಣತಿ ಹಿನ್ನೆಲೆಯಲ್ಲಿ ಏಪ್ರಿಲ್ ತಿಂಗಳಿನಲ್ಲಿ ನಡೆಯಲಿರುವ ಮನೆಗಣತಿಗೆ ಎಲ್ಲರೂ ಪೂರಕ ಸಹಕಾರ ನೀಡಬೇಕು ಎಂದು ಶಾಸಕ ಹೆಚ್.ಪಿ.ಸ್ವರೂಪ್ ಮನವಿ ಮಾಡಿದರು.

ಸುದ್ದಿಗಾರರೊಂದಿಗೆ ಬುಧವಾರ ಮಾತನಾಡಿದ ಅವರು, 2021ರ ನಂತರ ಜನಗಣತಿ ನಡೆದಿಲ್ಲ. ಹಾಗಾಗಿ 2027ಕ್ಕೆ ಜನಗಣತಿ ಮಾಡಲು ಕೇಂದ್ರ ಸರ್ಕಾರ ಮುಂದಾಗಿದೆ. ಇದರ ಜೊತೆಗೆ ಆನ್ಲೈನ್ ಮೂಲಕ ನಡೆಯಲಿರುವ ಮನೆ ಗಣತಿಗೂ ಎಲ್ಲರೂ ತಪ್ಪದೆ ಪಾಲ್ಗೊಳ್ಳಬೇಕು ಎಂದು ಕರೆ ನೀಡಿದರು.

## ಇತಿಹಾಸದಲ್ಲಿ ಈ ದಿನ

### ಏಪ್ರಿಲ್-02

1513: ಸ್ಪೇನ್ ಅನ್ವೇಷಕ ಜುವಾನ್ ಪೋನ್ಸ್ ಡೆ ಲಿಯೋನ್ ಫ್ಲೋರಿಡಾ ಪ್ರದೇಶವನ್ನು ಕಂಡುಹಿಡಿದನು.

1792: ಅಮೆರಿಕಾದಲ್ಲಿ ನಾಣ್ಯ ವ್ಯವಸ್ಥೆ ಜಾರಿಯಾಯಿತು.

1917: ಅಮೆರಿಕ ಅಧ್ಯಕ್ಷ ವುಡ್ರೋ ವಿಲ್ಸನ್ ಪ್ರಥಮ ವಿಶ್ವ ಯುದ್ಧದಲ್ಲಿ ಭಾಗವಹಿಸಲು ಕಾಂಗ್ರೆಸ್‌ಗೆ ಮನವಿ ಮಾಡಿದರು.

2011: ವಿಶ್ವ ಆತಿಸಂ ಜಾಗೃತಿ ದಿನ ಅನ್ನು ವಿಶ್ವದಾದ್ಯಂತ ಆಚರಿಸಲಾಗುತ್ತದೆ.

**ಜನನ**

1805: ಹಾನ್ಸ್ ಕ್ರಿಸ್ಟಿಯನ್ ಆಂಡರ್ಸನ್, ಪ್ರಸಿದ್ಧ ಕಥೆಗಾರ

1902: ಜಾನ ಸ್ಟೆನ್‌ಬೆಕ್, ನೋಬೆಲ್ ಪ್ರಶಸ್ತಿ ವಿಜೇತ ಲೇಖಕ

1973: ಮೈಕೆಲ್ ಫ್ಯಾಸ್ಬೆಂಡರ್, ಖ್ಯಾತ ನಟ

**ನಿಧನ**

1914: ಪಾಲ್ ವಾನ್ ಹಿಂಡೆನ್‌ಬರ್ಗ್, ಜರ್ಮನ್ ಸೇನಾ ನಾಯಕ

# ಒಳ ಮೀಸಲಾತಿ ವಿಳಂಬ: ಸರ್ಕಾರಿ ಕಾರ್ಯಕ್ರಮ ಬಹಿಷ್ಕಾರ ನಿರ್ಧಾರ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಸೀಕೆರೆ: ಮೂವತ್ತು ವರ್ಷಗಳ ಹೋರಾಟದ ನಂತರವೂ ಒಳಮೀಸಲಾತಿ ಜಾರಿ ಮಾಡುವಲ್ಲಿ ಪ್ರಸ್ತುತ ಕಾಂಗ್ರೆಸ್ ಸರ್ಕಾರ ಮೀನಮೇಷ ಎಣಿಸುತ್ತಿದ್ದು ಸರ್ಕಾರದ ಧೋರಣೆಯನ್ನು ಖಂಡಿಸುವ ಭಾಗವಾಗಿ ತಾಲ್ಲೂಕಿನಲ್ಲಿ ನಡೆಯುವ ಎಲ್ಲ ಸರ್ಕಾರಿ ಕಾರ್ಯಕ್ರಮಗಳನ್ನು ಹಾಗೂ ಜಯಂತಿ ಆಚರಣೆಗಳನ್ನು ಬಹಿಷ್ಕಾರ ಮಾಡಲು ಮಾದಿಗ ಸಮುದಾಯ ನಿರ್ಧಾರ ಮಾಡಿದೆ ಎಂದು ಮಾದಿಗ ಸಮನ್ವಯ ಸಮಿತಿಯ ಗುತ್ತಿನಕೆರೆ ಶಿವಮೂರ್ತಿ ತಿಳಿಸಿದರು.

ನಗರದ ಪ್ರವಾಸಿ ಮಂದಿರದಲ್ಲಿ ನಡೆದ ಮಾದಿಗ ಸಮುದಾಯದ ಮುಖಂಡರ ಸಭೆಯಲ್ಲಿ ಮಾತನಾಡಿದ ಅವರು, ರಾಜ್ಯ ರಾಜ್ಯ ಸರ್ಕಾರ ಒಳಮೀಸಲಾತಿ ಜಾರಿ ಮಾಡಲು ತಡ ಮಾಡುತ್ತಿದ್ದು, ಮಾದಿಗರ ಕಣ್ಣಿಗೆ ಮಣ್ಣೆರಚುವ ಕೆಲಸವನ್ನು ಮಾಡುತ್ತಿದ್ದು ಸರ್ಕಾರದ ನಡೆಯನ್ನು ಖಂಡಿಸುತ್ತೇವೆ. ಒಳ ಮೀಸಲಾತಿ ವಿಚಾರವಾಗಿ ಸರ್ಕಾರದ ಧೋರಣೆಯನ್ನು ಖಂಡಿಸುವ ಭಾಗವಾಗಿ ಸರ್ಕಾರದಿಂದ ಆಚರಿಸುವ ಯಾವುದೇ ಗೌರವಾನ್ವಿತ ಮಹನೀಯರ ಜಯಂತಿ ಹಾಗೂ ಇತರೆ ಸರ್ಕಾರಿ ಕಾರ್ಯಕ್ರಮಗಳನ್ನು ಬಹಿಷ್ಕರಿಸುವ ನಿರ್ಧಾರವನ್ನು ಸಭೆಯಲ್ಲಿ



ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಸರ್ಕಾರ ಹಾಗೂ ಸರ್ಕಾರದ ಭಾಗವಾಗಿರುವ ತಾಲ್ಲೂಕು ಆಡಳಿತ ಆಯೋಜನೆ ಮಾಡಿರುವ ಏ. 5ರಂದು ಬರುವ ಡಾ.ಬಾಬು ಜಗಜೀವನ ರಾಮ್ ಅವರ ಜಯಂತಿ ಹಾಗೂ 14ರಂದು ಅಂಬೇಡ್ಕರ್ ಜಯಂತಿಯನ್ನು ಮಾದಿಗ ಸಮುದಾಯ ಸರಕಾರದ ನಡೆಯಿಂದಾಗಿ ಹಾಗೂ ಒಳಮೀಸಲಾತಿ ಜಾರಿ ಮಾಡಲು ತಡ ಮಾಡುತ್ತಿರುವ ಸಲುವಾಗಿ ಬಹಿಷ್ಕಾರ ಮಾಡುತ್ತಿದ್ದೇವೆ. ಹಾಗೂ ಮಹನೀಯರಿಗೆ ಗೌರವ ಸಲ್ಲಿಸುವ ಸಲುವಾಗಿ ಬದಲಿ ದಿನದಂದು ಮಾದಿಗ ಸಮುದಾಯ ಮಹನೀಯರ ಜಯಂತಿ ಆಚರಣೆಯನ್ನು ಪ್ರತ್ಯೇಕವಾಗಿ ಮಾಡಲು ನಿರ್ಧರಿಸಿದ್ದೇವೆ ಎಂದು ತಿಳಿಸಿದರು.

ಕರ್ನಾಟಕ ಮಾದಿಗ ದಂಡೋರ ಜಿಲ್ಲಾಧ್ಯಕ್ಷ ಎಂ ಟಿ ವೆಂಕಟೇಶ್ ಮಾತನಾಡಿ, ಒಳಮೀಸಲಾತಿ ವಿಚಾರದಲ್ಲಿ ಸರ್ಕಾರ ಮಾದಿಗ ಸಮುದಾಯಕ್ಕೆ ದಶಕಗಳಿಂದ ಅನ್ಯಾಯ ಮಾಡುತ್ತಲೇ ಬರುತ್ತಿದೆ. ಸರ್ಕಾರ ವಿಶೇಷ ಸಚಿವ ಸಂಪುಟ ಸಭೆಯನ್ನು ಸಹ ಮುಂದೂಡಿ ಮತ್ತೆ ಅನ್ಯಾಯ ಮಾಡುತ್ತಿದ್ದು, ಸರ್ಕಾರದ ಮಾದಿಗ ವಿರೋಧಿ ನಡೆಯನ್ನು ಖಂಡಿಸಿ ಸರ್ಕಾರಿ ಕಾರ್ಯಕ್ರಮಗಳನ್ನು ಬಹಿಷ್ಕಾರ ಮಾಡುತ್ತಿದ್ದೇವೆ ಎಂದರು.

ಭೂ ನ್ಯಾಯ ಮಂಡಳಿ ಸದಸ್ಯರಾದ ನಾಗವೇದಿ ಕರಿಯಪ್ಪ ಮಾತನಾಡಿ, ಒಳ ಮೀಸಲಾತಿ ವಿಚಾರವಾಗಿ ಯಾವುದೇ ಸರ್ಕಾರ ವಿರೋಧ ಮಾಡಿದರು ಅವರಿಗೆ ನಮ್ಮ ವಿರೋಧವಿದೆ. ಸಮುದಾಯದ ಪರವಾಗಿ ನಿಲ್ಲಬೇಕಾದದ್ದು ಮಾದಿಗ ಸಮುದಾಯದವರಾದ ನಮ್ಮಗಳ ಕೆಲಸ, ಒಳ ಮೀಸಲಾತಿ ಜಾರಿಗೆ ಆಗ್ರಹಿಸುತ್ತ ಮುಂದಿನ ವಿಶೇಷ ಸಚಿವ ಸಂಪುಟ ಸಭೆಯಲ್ಲಿ ಒಳ ಮೀಸಲಾತಿ ಜಾರಿ ಮಾಡಿದೆ ಇದ್ದರೆ ಸರ್ಕಾರದಿಂದ ನೇಮಕವಾಗಿರುವ ಭೂ ನ್ಯಾಯ ಮಂಡಳಿ ಸದಸ್ಯ ಸ್ಥಾನಕ್ಕೆ ರಾಜೀನಾಮೆ ನೀಡುವ ಮೂಲಕ ಸಮುದಾಯದ ಪರವಾಗಿ ನಿಲ್ಲುತ್ತೇವೆ ಎಂದರು. ಸಮುದಾಯದ ಮುಖಂಡ ಸಂಕೊಡನಹಳ್ಳಿ ಮಂಜುನಾಥ್ ಮಾತನಾಡಿ, ಸರ್ಕಾರಿ ಕಾರ್ಯಕ್ರಮಗಳನ್ನು ಹಾಗೂ ಯಾವುದೇ ಸಭೆಗಳನ್ನು ಮಾದಿಗ ಸಮುದಾಯದ ಯಾರೊಬ್ಬರು ಸಹ ಭಾಗವಹಿಸಬಾರದು, ಒಳ ಮೀಸಲಾತಿ ಜಾರಿಯಾಗುವವರೆಗೂ ಸರ್ಕಾರದ ಎಲ್ಲ ಸಭೆ, ಕಾರ್ಯಕ್ರಮ ಹಾಗೂ ಜಯಂತಿಗಳನ್ನು ಬಹಿಷ್ಕಾರ ಮಾಡುವ ಮೂಲಕ ಒಳಮೀಸಲಾತಿ ಜಾರಿ ವಿಚಾರದಲ್ಲಿ ಸಮಯ ವ್ಯರ್ಥ ಮಾಡುತ್ತಿರುವ ಸರ್ಕಾರದ ವಿರುದ್ಧ ನಮ್ಮ ಹೋರಾಟ ಮುಂದುವರಿಸೋಣ ಎಂದರು.

ಕರ್ನಾಟಕ ಮಾದಿಗ ದಂಡೋರ ತಾಲ್ಲೂಕು ಅಧ್ಯಕ್ಷ ಎ.ಪಿ. ಚಂದ್ರಯ್ಯ ಮಾತನಾಡಿ, ಸರ್ಕಾರ ಆಯೋಜನೆ ಮಾಡಿರುವ ಕಾರ್ಯಕ್ರಮಗಳಿಗೆ ಮಾದಿಗ ಸಮುದಾಯದ ಯಾರು ಕೂಡ ಭಾಗವಹಿಬಾರದು. ಬದಲಿಗೆ ನಿಮ್ಮ ನಿಮ್ಮ ಗ್ರಾಮಗಳಲ್ಲಿ ಹಾಗೂ ಸಮುದಾಯದಿಂದ ಆಯೋಜನೆ ಮಾಡುವ ಕಾರ್ಯಕ್ರಮದಲ್ಲಿ ಭಾಗವಹಿಸುವ ಮೂಲಕ ಸರ್ಕಾರದ ನಡೆಯನ್ನು ಖಂಡಿಸಬೇಕು ಎಂದರು.

# ಪಾಲಹಳ್ಳಿಯಲ್ಲಿ ಆಂಜನೇಯ ಏಕಶಿಲಾ ವಿಗ್ರಹ ಪ್ರತಿಷ್ಠಾಪನೆ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲೆಯ ಪ್ರಥಮ 16 ಅಡಿ ಏಕಶಿಲಾ ಶ್ರೀ ಆಂಜನೇಯ ಸ್ವಾಮಿ ನೂತನ ವಿಗ್ರಹ ಪ್ರತಿಷ್ಠಾಪನಾ ಮಹೋತ್ಸ ಏ.2 ರಿಂದ ಸಕಲೇಶಪುರ ತಾಲ್ಲೂಕು ಯಸಳೂರು ಹೋಬಳಿ ಕರಗೂರು ಕೂಡಿಗೆ (ಪಾಲಹಳ್ಳಿ) ಗ್ರಾಮದಲ್ಲಿ ನಡೆಯಲಿದೆ ಎಂದು ಶ್ರೀ ವಾಯುಪುತ್ರ ಸೇವಾ ಸಮಿತಿ ಅಧ್ಯಕ್ಷ ಬಿ.ಎಸ್.ತೇಜಸ್ವಿ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 3 ದಿನಗಳ ಕಾಲ ವೇದಿಕೆ ಹಾಗೂ ಆಧ್ಯಾತ್ಮಿಕ ಕಾರ್ಯಕ್ರಮ ನೆರವೇರಲಿವೆ. ಏ. 2 ರಂದು ಬೆಳಿಗ್ಗೆ ಗಣೇಶ ಪ್ರಾರ್ಥನೆ, ಚಪ್ಪರ ಪೂಜೆ, ಮಹಾಸಂಕಲ್ಪ, ಕಂಕಣಧಾರಣೆ, ಪಂಚಗವ್ಯ ಮೇಳನ ಸೇರಿ ಹಲವು ಪೂಜಾ ಕಾರ್ಯಕ್ರಮ ನಡೆಯಲಿವೆ. ಪ್ರತಿದಿನ ಸಂಜೆ ದಾನಿಗಳ ಸನ್ಮಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ರಾತ್ರಿ ವೇಳೆ ಕಾಮಿಡಿ ಕಿಲಾಡಿ ಖ್ಯಾತಿಯ ಶಿವರಾಜ್ ಕೆ.ಆರ್.ಪೇಟೆ ಮತ್ತು ತಂಡದಿಂದ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿದೆ ಎಂದು ತಿಳಿಸಿದರು.

ಏಪ್ರಿಲ್ 3 ರಂದು ಬೆಳಿಗ್ಗ 108 ಸುಮಂಗಲಿಯರೊಂದಿಗೆ ಗಂಗಾ ಕಳಶ ಪ್ರವೇಶ ಕಾರ್ಯಕ್ರಮ ಜರುಗಲಿದ್ದು, ಕಳಸ ಪೂಜೆ, ವೇದ ಪಾರಾಯಣ, ಗಂಗಾಪೂಜೆ, ಗೋಪೂಜೆ ನಡೆಯಲಿದೆ. ಬಂಟ್ವಾಳ ತಾಲ್ಲೂಕಿನ ಶ್ರೀ ರಾಜರಾಜೇಶ್ವರಿ ಭಜನಾ ಮಂಡಳಿಯಿಂದ ಭಜನಾ ಕಾರ್ಯಕ್ರಮ ಭಕ್ತರನ್ನು ಆಧ್ಯಾತ್ಮಿಕ ತೊಳಲಿನಲ್ಲಿ ಮುಳುಗಿಸಲಿದೆ ಎಂದರು.

ಏಪ್ರಿಲ್ 4ರಂದು ಮುಂಜಾನೆ ಧಾರ್ಮಿಕ ಕಾರ್ಯಕ್ರಮ ನಂತರ ಬೆಳಿಗ್ಗ 10.30ಕ್ಕೆ ನಡೆಯುವ ಸಭಾ ಕಾರ್ಯಕ್ರಮದಲ್ಲಿ ವಿವಿಧ ಮಠಾಧೀಶರು ಹಾಗು ಗಣ್ಯರು ಭಾಗವಹಿಸಿ ಆಶೀರ್ವಚನ ನೀಡಲಿದ್ದಾರೆ. ಕಾರ್ಯಕ್ರಮಕ್ಕೆ ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ, ಶ್ರೀ ಶಂಭುನಾಥ ಸ್ವಾಮೀಜಿ ಸೇರಿ ವಿವಿಧ ಧಾರ್ಮಿಕ ಗುರುಗಳು ಆಗಮಿಸಲಿದ್ದಾರೆ. ಜೊತೆಗೆ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ, ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣ ಬೈರೇಗೌಡ, ಮಾಜಿ ಸಚಿವ ಸಿ.ಟಿ.ರವಿ, ಸಂಸದ ಶ್ರೇಯಸ್ ಪಟೇಲ್ ಹಾಗು ಜಿಲ್ಲೆಯ ಎಲ್ಲಾ ಶಾಸಕರು ಭಾಗಿಯಾಗಲಿದ್ದಾರೆ ಎಂದು ತಿಳಿಸಿದರು.

ಸಮಿತಿ ಗೌರವಾಧ್ಯಕ್ಷ ಕೆ.ಕೆ.ರಾಮಚಂದ್ರ, ನಿರ್ದೇಶಕ ಹೆಚ್.ಡಿ. ಜೈಕುಮಾರ್, ಕೆ.ಎಸ್. ರವಿಕುಮಾರ್ ಇದ್ದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248